ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1810
ಮಾನ್ಯ ಸದಸ್ಯರ ಹೆಸರು	:	ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	22.03.2021
ಉತ್ತರಿಸುವ ಸಚಿವರು	:	ಮಾನ್ಯ ಉಪ ಮುಖ್ಯ ಮಂತ್ರಿಗಳು (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ)

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು ಎಷ್ಟು;	ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಒಟ್ಟು 44 ಅನುದಾನಿತ ಪಾಲಿಟೆಕ್ನಿಕ್‌ಗಳಿದ್ದು, ಅದರಲ್ಲಿ ಎಐಸಿಟಿಇ ವೇತನ ಶ್ರೇಣಿಯಲ್ಲಿ ಒಟ್ಟು 1051 ಉಪನ್ಯಾಸಕರುಗಳು ಕಾರ್ಯನಿರ್ವಹಿಸುತ್ತಿದ್ದಾರೆ.
ಆ	ಇವರಿಗೆ 7ನೇ ಎಐಸಿಟಿಇ ಪರಿಷ್ಕೃತ ವೇತನವನ್ನು ಮಂಜೂರು ಮಾಡದೆ ಇರುವುದು ಸರ್ಕಾರದ ಗಮನದಲ್ಲಿದೆಯೇ;	ಸರ್ಕಾರದ ಗಮನಕ್ಕೆ ಬಂದಿದೆ.
ಇ	ವೇತನ ಶ್ರೇಣಿಯನ್ನು ನೀಡದೆ ಇರುವುದಕ್ಕೆ ಕಾರಣವೇನು;	ಸರ್ಕಾರದ ಆದೇಶ ಸಂಖ್ಯೆ: ಇಡಿ 12 ಡಿಟಿಇ 2019 (ಭಾಗ) 22.04.2020ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಉಪನ್ಯಾಸಕರಿಗೆ 7ನೇ ಪರಿಷ್ಕೃತ ವೇತನ ಶ್ರೇಣಿಗಳನ್ನು ಜಾರಿಗೊಳಿಸಿ ಆದೇಶಿಸಲಾಗಿರುತ್ತದೆ. 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 60 ಶಾಸನ 2013, ದಿನಾಂಕ:12.02.2014ರಲ್ಲಿ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ದಿನಾಂಕ:01.06.1995 ರಿಂದ ಅನ್ವಯವಾಗುವಂತೆ ಜಾರಿಗೊಳಿಸಲಾಗಿದೆ. ಸದರಿ ಅಧಿನಿಯಮದಲ್ಲಿ ಖಾಸಗಿ ಅನುದಾನಿತ ಸಂಸ್ಥೆಗಳ ಅನುದಾನಿತ ಸಿಬ್ಬಂದಿಗಳು ಅನುದಾನರಹಿತ ಅವಧಿಯಲ್ಲಿ ಸಲ್ಲಿಸಿದ ಸೇವೆಯನ್ನು ವೇತನ ರಜೆ, ನಿವೃತ್ತಿ ವೇತನ ಮತ್ತು ಇತರೆ ಯಾವುದೇ ಸೇವಾ ಸೌಲಭ್ಯಗಳಿಗಾಗಿ

ಪರಿಗಣಿಸತಕ್ಕದ್ದಲ್ಲವೆಂದು ತಿಳಿಸಲಾಗಿದೆ.

2. ಆದರೆ ಸದರಿ ಅಧಿನಿಯಮವನ್ನು ಪ್ರಶ್ನಿಸಿ ಅನುದಾನಿತ ಸಿಬ್ಬಂದಿಗಳು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಧಾರವಾಡ ಪೀಠದಲ್ಲಿ ದಾಖಲಿಸಿದ್ದ ರಿಟ್ ಅರ್ಜಿ ಸಂಖ್ಯೆ:21216/2014ರಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:10.07.2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮವನ್ನು ವಜಾಗೊಳಿಸಿರುತ್ತದೆ. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಧಾರವಾಡ ಪೀಠವು ದಿನಾಂಕ:10.07.2015ರಂದು ನೀಡಿರುವ ತೀರ್ಪನ್ನು ಪ್ರಶ್ನಿಸಿ, ರಾಜ್ಯ ಸರ್ಕಾರವು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ದ್ವಿಸದಸ್ಯ ಪೀಠದಲ್ಲಿ ರಿಟ್ ಅಪೀಲು ಸಂಖ್ಯೆ: 2476/2015ನ್ನು ಸಲ್ಲಿಸಿದ್ದು, ಸದರಿ ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಯ ಹಂತದಲ್ಲಿರುತ್ತದೆ. ಮುಂದುವರೆದು, ಸದರಿ ರಿಟ್ ಅಪೀಲಿನಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:27.11.2015ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ಈ ಕೆಳಕಂಡಂತೆ ತಿಳಿಸಲಾಗಿದೆ.

In so far as in service respondents are concerned, we record the statement of the learned Advocate General that **the State shall go on paying their current emoluments in terms of the refixation,** subject, however, to the result of the Writ Appeal. However, they are restrained from initiating any recovery proceedings for recovery of the arrears of pay. So far as the retired employees are concerned learned Advocate General submits that the pension they are getting shall be continued to be paid to them. He submits that in some cases the pensions are based on the old scales and in some cases after re-fixation. The State shall be paying the pension as are paid to

		those retired employees as of today So far as recovery proceedings and calculation of the pension in terms of the new regulation are concerned, the proceedings shall, remain stayed. 3. ಮಾನ್ಯ ನ್ಯಾಯಾಲಯದ ಮೇಲ್ಕಂಡ ಮಧ್ಯಂತರ ಆದೇಶದನ್ವಯ ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಉಪನ್ಯಾಸಕರಿಗೆ ಅವರು ದಿನಾಂಕ:27.11.2015ರಂದು ಪಡೆಯುತ್ತಿದ್ದ ವೇತನವನ್ನೇ ಮುಂದುವರೆಸಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಸದರಿ 36 ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಬೋಧಕ ವೃಂದದ ಸಿಬ್ಬಂದಿಗಳಿಗೆ 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನ ನಿಗದಿಪಡಿಸಲು ಸಾಧ್ಯವಾಗಿರುವುದಿಲ್ಲ. ಪ್ರಸ್ತುತ ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಯ ಹಂತದಲ್ಲಿದ್ದು, ಈ ಬಗ್ಗೆ ಅನುದಾನ ರಹಿತ ಸೇವೆಯನ್ನು ಪರಿಗಣಿಸುವ ಬಗ್ಗೆ ಅಂತಿಮ ತೀರ್ಮ ಬಂದ ನಂತರ ಬೋಧಕ ವೃಂದದವರಿಗೆ 2018ರ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಗಳಲ್ಲಿ ವೇತನ ನಿಗದಿಪಡಿಸುವ ಬಗ್ಗೆ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಈ ಹಿನ್ನೆಲೆಯಲ್ಲಿ, ಕೆಳಕಂಡ 07 ಪಾಲಿಟೆಕ್ನಿಕ್ ಸಂಸ್ಥೆಗಳು ಬಹಳ ಹಳೆಯ ಸಂಸ್ಥೆಗಳಾಗಿದ್ದು, ಸದರಿ ಸಂಸ್ಥೆಗಳಲ್ಲಿನ ಬೋಧಕ ವೃಂದದ ಸಿಬ್ಬಂದಿಗಳು ಅನುದಾನಿತ ಹುದ್ದೆಯಲ್ಲಿಯೇ ನೇಮಕಗೊಂಡಿದ್ದು, ಅನುದಾನರಹಿತ ಅವಧಿಯ ಸೇವೆಯನ್ನು ಪರಿಗಣಿಸಿ ಸೇವಾ ಸೌಲಭ್ಯಗಳನ್ನು ಪಡೆದಿರುವುದಿಲ್ಲ, ಇದಲ್ಲದೆ ಇಂಪ್ಯಾಕ್ಟ್ ಪಾಲಿಟೆಕ್ನಿಕ್, ಬೆಂಗಳೂರು ಈ ಸಂಸ್ಥೆಯ ಸಿಬ್ಬಂದಿಗಳೂ ಸಹ ಅನುದಾನಿತ ಸೇವೆಯನ್ನು ಮಾತ್ರ ಪರಿಗಣಿಸಿ ಸೇವಾ ಸೌಲಭ್ಯಗಳನ್ನು ಪಡೆದಿರುವುದರಿಂದ, ಈ 08 ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಬೋಧಕ ವೃಂದದ ಸಿಬ್ಬಂದಿಗಳಿಗೆ 07ನೇ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಯಲ್ಲಿ ವೇತನ ನಿಗದಿಗೆ ಅನುಮೋದನೆ ನೀಡಲಾಗಿರುತ್ತದೆ.

		(ಪಟ್ಟಿ ಕೆಳಗಿನಂತೆ)

ಕ್ರಸಂ	ಸಂಸ್ಥೆಯ ಹೆಸರು
9.	ಎ.ಪಿ.ಎಸ್ ಪಾಲಿಟೆಕ್ನಿಕ್, ಬಾಗಲಕೋಟೆ
10.	ಬಿ.ವಿ.ವಿ.ಎಸ್ ಪಾಲಿಟೆಕ್ನಿಕ್, ಬಾಗಲಕೋಟೆ
11.	ಜೆ.ಎಸ್.ಎಸ್. ಮಹಿಳಾ ಪಾಲಿಟೆಕ್ನಿಕ್,
12.	ಜೆ.ಎಸ್.ಎಸ್ ವಿಕಲಚೇತನರ ಪಾಲಿಟೆಕ್ನಿಕ್, ಮೈಸೂರು
13.	ಕೆ.ಹೆಚ್.ಕೆ ಪಾಲಿಟೆಕ್ನಿಕ್, ಧಾರವಾಡ
14.	ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು
15.	ಎಂ.ಇ.ಐ ಪಾಲಿಟೆಕ್ನಿಕ್, ಬೆಂಗಳೂರು
16.	ಇಂಪ್ಯಾಕ್ಟ್ ಪಾಲಿಟೆಕ್ನಿಕ್, ಬೆಂಗಳೂರು

ಈ	ಸರ್ಕಾರಿ ಪಾಲಿಟೆಕ್ನಿಕ್ ಉಪನ್ಯಾಸಕರುಗಳಿಗೆ ಪದವಿ ಕಾಲೇಜಿನ ಸರ್ಕಾರಿ ಹಾಗೂ ಅನುದಾನಿತ ಉಪನ್ಯಾಸಕರುಗಳಿಗೆ ವೇತನ ನೀಡುತ್ತಿರುವಂತೆ ಅನುದಾನಿತ ಪಾಲಿಟೆಕ್ನಿಕ್ ಉಪನ್ಯಾಸಕರುಗಳಿಗೆ ಯಾವಾಗ 7ನೇ ಎಐಸಿಟಿಇ ವೇತನ ಶ್ರೇಣಿಯನ್ನು ನೀಡಲಾಗುವುದು?	ಪ್ರಸ್ತುತ ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಯ ಹಂತದಲ್ಲಿದ್ದು ಅನುದಾನ ರಹಿತ ಸೇವೆಯನ್ನು ಪರಿಗಣಿಸುವ ಬಗ್ಗೆ ಅಂತಿಮ ತೀರ್ಪು ಬಂದ ನಂತರ ಉಳಿದ 36 ಅನುದಾನಿತ ಪಾಲಿಟೆಕ್ನಿಕ್‌ಗಳ ಬೋಧಕ ವೃಂದದವರಿಗೆ 2018ರ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಗಳಲ್ಲಿ ವೇತನ ನಿಗದಿಪಡಿಸುವ ಬಗ್ಗೆ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಇಡಿ 31 ಟಿಪಿಇ 2021

(ಡಾ॥ ಅಶ್ವತ್ಥನಾರಾಯಣ್.ಸಿ.ಎನ್)
ಉಪ ಮುಖ್ಯ ಮಂತ್ರಿಗಳು
(ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ)